ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 18–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮನೆಯಂಗಳದಲ್ಲಿ ಮಾತು ಕತೆ:<br><br>ತಿಂಗಳ ಅತಿಥಿ:<br><br>ಎಸ್.ಎಮ್. ಜಾಮಾದಾರ್,<br>ಆಡಳಿತ ತಜ್ಞ(ನಿವೃತ್ತ) | 19–09–2015<br><br>ಶನಿವಾರ<br><br>ಸಂಜೆ<br><br>4–00 ಗಂಟೆಗೆ | ನಯನ ಸಭಾಂಗಣ,<br>ಕನ್ನಡ ಭವನ,<br>ಜೆ.ಸಿ. ರಸ್ತೆ,<br>ಬೆಂಗಳೂರು. |
| 2. | ಬೆಳ್ಳಿ ಸಿನಿಮಾ – ಬೆಳ್ಳಿ ಮಾತು:<br><br>ಬೆಳ್ಳಿ ಸಿನಿಮಾ : “ತಲ್ಲಣ”, ಶ್ರೀಮತಿ ವಸುಂಧರಾ ಕುಲಕರ್ಣಿ, ಕಾರ್ಯಕಾರಿ ನಿರ್ಮಾಪಕರು<br><br>ಅಧ್ಯಕ್ಷತೆ:<br><br>ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು,<br>ಕರ್ನಾಟಕ ಚಲನಚಿತ್ರ ಅಕಾಡೆಮಿ,<br><br>ಮುಖ್ಯ ಅತಿಥಿಗಳು:<br><br>ಕೆ.ಎಸ್. ಶ್ರೀಧರ್,<br>ಚಲನಚಿತ್ರ ನಟರು | 19–09–2015<br><br>ಶನಿವಾರ<br><br>ಸಂಜೆ<br><br>4–00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ. ಬೆಂಗಳೂರು. |

| | | | |
|---|---|---|---|
| | ಎಂ.ಎನ್. ಸ್ವಾಮಿ,<br>ಸಂಕಲನಕಾರರು<br><br>ಸೂರ್ಯಕಾಂತ ಹೊನ್ನಾಳಿ<br>ಛಾಯಾಗ್ರಾಹಕರು | | |

**ನಿರ್ದೇಶಕರ ಪರವಾಗಿ**

## ಪತ್ರಿಕಾ ಪ್ರಕಟಣೆ

## ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯು ಯಕ್ಷಗಾನ (ತೆಂಕು, ಬಡಗು ಮತ್ತು ಘಟ್ಟದಕೋರೆ) ಮೂಡಲಪಾಯ, ಯಕ್ಷಗಾನ ಗೊಂಬೆಯಾಟ (ಸೂತ್ರದ ಮತ್ತು ತೊಗಲುಗೊಂಬೆ) ಶ್ರೀಕೃಷ್ಣಪಾರಿಜಾತ, ಸಣ್ಣಾಟ, ದೊಡ್ಡಾಟ ಇತ್ಯಾದಿ ಕಲಾಪ್ರಕಾರಗಳಲ್ಲಿ 2014 ನೇ ಸಾಲಿನ ಕ್ಯಾಲೆಂಡರ್ ವರ್ಷದಲ್ಲಿ (ಜನವರಿಯಿಂದ ಡಿಸೆಂಬರ್ ಒಳಗೆ) ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ ಅರ್ಜಿ ಆಹ್ವಾನಿಸಿದೆ.

ಆಯ್ಕೆಯಾದ ಪುಸ್ತಕಕ್ಕೆ ರೂ 5,000/- ಬಹುಮಾನವನ್ನು ನೀಡಲಾಗುವುದ. ಯಕ್ಷಗಾನ ಮತ್ತು ಬಯಲಾಟದ ವಿವಿಧ ಆಯಾಮಗಳ ಬಗ್ಗೆ (ಸಂಗೀತ, ಆಹಾರ್ಯ, ಅಭಿನಯ ಇತ್ಯಾದಿ) ಸಂಶೋಧನೆ, ವಿಮರ್ಶೆ ಜೀವನಚರಿತ್ರೆ, ಪ್ರಸಂಗ ಪುಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕೆ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು. ಸಂಪಾದಿತ, ಅಭಿನಂದನ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು.

ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇವರಿಗೆ 2015 ರ ಅಕ್ಟೋಬರ್ 15 ರೊಳಗೆ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸುವುದು. ಯಾವುದೇ ಕಾರಣಕ್ಕೂ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು

ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯ ದೂರವಾಣಿ ಸಂಖ್ಯೆ 080 – 22113146 ರಿಂದ ಪಡೆಯಬಹುದು.

**ಪಲ್ಲವಿ:ಬಾಬು:ಜಿಪಿಆರ್**

## ವಿಕಲಚೇತನರಿಗೆ ಆಯವ್ಯಯದಲ್ಲಿ ದುಪ್ಪಟ್ಟು ಅನುದಾನ :

### – ಮುಖ್ಯಮಂತ್ರಿಗಳು

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿರುವ ವಿಕಲಚೇತನರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಅನುದಾನವನ್ನು ದ್ವಿಗುಣಗೊಳಿಸಿದೆ. ಕಳೆದ ಮೂರು ವರ್ಷದ ಹಿಂದೆ 628 ಕೋಟಿ ರೂ. ಗಳಿದ್ದ ಅನುದಾನವನ್ನು ಈ ಸಾಲಿನಲ್ಲಿ 940 ಕೋಟಿ ರೂ. ಗಳಿಗೆ ಹೆಚ್ಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಬಗ್ಗೆ : 2011 ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ 13,24,205 ಅಂಗವಿಕಲರಿದ್ದು, ಇವರಲ್ಲಿ ಸುಮಾರು 2,71,982 ದೈಹಿಕ ಅಂಗವಿಲಕರು ಇದ್ದಾರೆ.

ರಾಜ್ಯದಲ್ಲಿ ವಿಕಲಚೇತನರಿಗೆ ಮಾನಸಿಕವಾಗಿ, ದೈಹಿಕವಾಗಿ ಶಕ್ತಿ ತುಂಬುವ ಕಾರ್ಯ ರಾಜ್ಯ ಸರ್ಕಾರದಿಂದ ನಡೆದಿದೆ. ಪ್ರೌಢಶಾಲಾ ವಿದ್ಯಾಭ್ಯಾಸ ನಂತರ ಪ್ರತಿಭಾವಂತ ವಿಕಲಚೇತನರು ಉನ್ನತ ಶಿಕ್ಷಣ ಮುಂದುವರಿಸಲು ಅನುಕೂಲವಾಗುವಂತೆ ಟಾಕಿಂಗ್ ಲ್ಯಾಪ್‌ಟಾಪ್ ನೀಡಲು ಕ್ರಮ ಕೈಗೊಳ್ಳಲಾಗಿದೆ. ವಿಕಲಚೇತನರ ಸಾಲಮನ್ನಾ ಮಾಡಲಾಗುತ್ತಿದೆ. ವಿಕಲಚೇತನರಿಗಾಗಿ ಸಹಾಯವಾಣಿ, ಪ್ರೋತ್ಸಾಹ ಧನ ಹೆಚ್ಚಳ ಕೈಗೊಳ್ಳಲಾಗಿದೆ. ಶ್ರವಣ ದೋಷವುಳ್ಳ ವಿಕಲಚೇತನರಿಗೆ ಉಪಗ್ರಹ ಆಧಾರಿತ ಶಿಕ್ಷಣ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಮುಖ್ಯಮಂತ್ರಿಗಳು. ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ಮೂಲಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಹಜ್ ಖಾತೆಯ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಿದ್ದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ, ಅಂಗವಿಕಲ ಕಲ್ಯಾಣ ಇಲಾಖೆಯ ಆಯುಕ್ತ ರಾಜಣ್ಣ, ಇಲಾಖೆಯ ಪ್ರಧಾನ ಕಾರ್ಯದರ್ಶಿ ರಜನೀಶ್ ಗೋಯಲ್ ಉಪಸ್ಥಿತರಿದ್ದರು.

**ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕುರಿತಂತೆ:** ವಿಕಲಚೇತನರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಮತ್ತು ವೈದ್ಯಕೀಯ ಪುನರ್ವಸತಿ ಕಲ್ಪಿಸಿ ತನ್ಮೂಲಕ ಅವರನ್ನು ಸಮಾಜದ

ಮುಖ್ಯ ವಾಹಿನಿಗೆ ಸೇರುವಂತೆ ಮಾಡುವುದು ಮತ್ತು ಸಾಮಾನ್ಯ ಜನರಲ್ಲಿ ಜಾಗೃತಿ ಮೂಡಿಸುವುದು. ವಿಕಲಚೇತನರ ಹಕ್ಕುಗಳನ್ನು ಸಂರಕ್ಷಿಸುವುದು. ಅವರಿಗೆ ಸಮಾನ ಅವಕಾಶಗಳನ್ನು ಕಲ್ಪಿಸುವುದು ಹಾಗೂ ವಿಲಚೇತನರು ಎದುರಿಸುವ ವಿವಿಧ ರೀತಿಯ ಸಮಸ್ಯೆಗಳತ್ತ ಸಮಾಜದ ಗಮನವನ್ನು ಸೆಳೆದು ಸಮುದಾಯದಲ್ಲಿ ಜಾಗೃತಿ ಮೂಡಿಸುವಂತೆ ಮಾಡುವುದು ಇಲಾಖೆಯ ಉದ್ದೇಶವಾಗಿದೆ.

ವಿಕಲಚೇತನರು ಸಮಾದಜ ಮುಖ್ಯವಾಹಿನಿಯಲ್ಲಿ ಸುಗಮವಾಗಿ ಭಾಗವಹಿಸಲು ಅವರಿಗೆ ಸೂಕ್ತ ಶೈಕ್ಷಣಿಕ ಸೌಲಭ್ಯ, ಉದ್ಯೋಗವಕಾಶ ಮತ್ತು ತರಬೇತಿ ಹಾಗೂ ಸಾಮಾಜಿಕ ಭದ್ರತೆ ಮತ್ತು ಅವರಿಗೆ ಸೂಕ್ತವಾದಂತಹ ಅಡತಡೆಗಹಿತ ವಾತಾವರಣ, ಅವಶ್ಯಕ ಸಾಧನ ಸಲಕರಣೆಗಳನ್ನು ಒದಗಿಸುವುದು ಅತ್ಯಗತ್ಯವಾಗಿರುತ್ತದೆ. ಇದರಿಂದ ಅವರೂ ಸಹ ಸಮಾಜದಲ್ಲಿ ಘನತೆ ಗೌರವದಿಂದ ಬಾಳ್ವೆ ನಡೆಸಲು ಸಾಧ್ಯವಾಗುತ್ತದೆ. ಇಲಾಖೆಯು ಈ ನಿಟ್ಟಿನಲ್ಲಿ ವಿಕಲಚೇತನರ ಸಬಲೀಕರಣಕ್ಕಾಗಿ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.

ರಾಜ್ಯ ಸರ್ಕಾರವು ಅಂಗವಿಕಲರ ಶ್ರೇಯೋಭಿವೃದ್ಧಿಗಾಗಿ ಬಹುಮುಖ್ಯವಾದ ಸಾಧನ ಸಲಕರಣೆ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಈ ಯೋಜನೆಯಡಿ ಎಲ್ಲಾ ತರಹದ ಅಂಗವಿಲರಿಗೆ ಅವರ ಅಂಗವಿಕಲತೆಯನುಸಾರ ಅವಶ್ಯಕವಿರುವ ತ್ರಿಚಕ್ರವಾಹನ, ಗಾಲಿ ಕುರ್ಚಿ, ಶ್ರವಣ ಸಾಧನ, ಅಂಧರಿಗೆ ಕೋಲು, ಲ್ಯಾಪ್‌ಟಾಪ್ ಮುಂತಾದ ವಿವಿಧ ಸಾಧನಸಲಕರಣೆಗಳನ್ನು ವಿತರಿಸಲಾಗುತ್ತಿದೆ.

ಇಲ್ಲಿಯವರೆಗೂ ಸಾಧನ ಸಲಕರಣೆ ಯೋಜನೆಯಡಿ ತೀವ್ರತರವಾದ ದೈಹಿಕ ಅಂಗವಿಕಲನ್ನೊಳಗೊಂಡಂತೆ ಸಾದಾ ತ್ರಿಚಕ್ರ 'ವಾಹನಗಳನ್ನು ಮಾತ್ರ ಉಚಿತವಾಗಿ ವಿತರಿಸಲಾಗುತ್ತಿತ್ತು. ಈ ವಾಹನಗಳನ್ನು ಹತ್ತಿರದ ಸ್ಥಳಗಳಿಗೆ ಹೋಗಿಬರಲು ಮಾತ್ರ ಸಾಧ್ಯವಾಗುವುದನ್ನು ಮತ್ತು ತೀವ್ರತರನಾದ ಅಂಗವಿಕಲರು ಸಾರ್ವಜನಿಕ ಸಾರಿಗೆ ವ್ಯವಸ್ಥೆಯಲ್ಲಿ ಚಲಿಸಲು ತೊಂದರೆ ಅನುಭವಿಸುತ್ತಿರುವುದನ್ನು ಮನಗಂಡು ಇವರ ದೈನಂದಿನ ಜೀವನಕ್ಕೆ ಅನುಕೂಲವಾಗುವಂತೆ ಹಾಗೂ ಇವರಿಗೆ ಸುಗಮವಾಗಿ ಓಡಾಡಲು ಅನುವಾಗುವಂತೆ ರಾಜ್ಯ ಸರ್ಕಾರವು ತೀವ್ರತರವಾದ ಅಂಗವಿಕಲರಿಗೆ ಪ್ರಪ್ರಥಮ ಬಾರಿಗೆ ಉಚಿತವಾಗಿ ಯಂತ್ರಚಾಲಿತ ತ್ರಿಚಕ್ರವಾಹನಗಳನ್ನು ವಿತರಿಸುವ ಯೋಜನೆಯನ್ನು ಹೊಸದಾಗಿ ಅನುಷ್ಠಾನಗೊಳಿಸುತ್ತಿದೆ. ಜೀವಿತ ಕಾಲದಲ್ಲಿ ಒಂದು ಬಾರಿಗೆ ಮಾತ್ರ ಯಂತ್ರಚಾಲಿತ ತ್ರಿಚಕ್ರವಾಹನಗಣನ್ನು ನೀಡುವ ಯೋಜನೆ ಇದಾಗಿದೆ. ಪ್ರಸ್ತುತ ಸಾಲಿನಲ್ಲಿ 900 ದೈಹಿಕ ಅಂಗವಿಕಲರಿಗೆ ಈ ಯೋಜನೆಯ ಸೌಲಭವನ್ನು ಒದಗಿಸಲಾಗುತ್ತಿದೆ.

ಈ ಯೋಜನೆಯಡಿಯಲ್ಲಿನ ಸೌಲಭ್ಯ ಪಡೆಯಲು ವಿಕಲಚೇತನ ವ್ಯಕ್ತಿಗಳು ಭಾರತದ ಪ್ರಜೆಯಾಗಿದ್ದು, ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರತಕ್ಕದ್ದು, ಈ ಸೌಲಭ್ಯ ಪಡೆಯುವ ದೈಹಿಕ ವಿಕಲಚೇತನ ವ್ಯಕ್ತಿಗಳು ಶೇ 75 ಕ್ಕಿಂತ ಹೆಚ್ಚಿನ ದೈಹಿಕ ವಿಕಲಚೇತನರಾಗಿದ್ದು ಹಾಗೂ ಸೊಂಟದ ಕೆಳಗೆ ಅಂದರೆ ಎರಡು ಕಾಲುಗಳ ಸ್ವಾದೀನ ಕಳೆದುಕೊಂಡಿರುವ ಎರಡು ಕೈಗಳು ಸ್ವಾದೀನದಲ್ಲಿರುವ ಹಾಗೂ ಇತರೆ ಎಲ್ಲಾ ರೀತಿಯ್ಲಿ ಸದ್ರಢವಾಗಿರುವ ವಿಕಲಚೇತನರಾಗಿರಬೇಕು. 20 ರಿಂದ 60 ವರ್ಷ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಾಗಿದ್ದು, ಅವರ ಕುಟುಂಬ ವಾರ್ಷಿಕ ವರಮಾನ ರೂ. 2.00 ಲಕ್ಷಗಳಿಗಿಂತ

ಕಡಿಮೆಯಿರಬೇಕು. ಅಂಗವಿಕಲರು ಯಂತ್ರಚಾಲಿತ ತ್ರಿಚಕ್ರವಾಹನಗಳನ್ನು ಜಿಲ್ಲೆಗಳಲ್ಲಿನ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯು ಮುಖಾಂತರ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಯಂತ್ರಚಾಲಿತ ತ್ರಿಚಕ್ರವಾಹನಗಳನ್ನು ವಿತರಿಸಲಾಗುತ್ತದೆ.

ಪ್ರಸ್ತುತ ಬೆಂಗಳೂರು ನಗರ ಜಿಲ್ಲೆಯಲ್ಲಿನ 50 ದೈಹಿಕ ಅಂಗವಿಕಲರಿಗೆ ಯಂತ್ರಚಾಲಿತ ತ್ರಿ–ಚಕ್ರವಾಹನಗಳನ್ನು ವಿತರಿಸಲು ಸಮಾರಂಭವನ್ನು ವಿಧಾನಸೌಧದ ಮುಂಭಾಗದಲ್ಲಿ ಇಂದು ಆಯೋಜಿಸಲಾಗಿದ್ದು, ಈ ಸಮಾರಂಭದಲ್ಲಿ ಮುಖ್ಯಮಂತ್ರಿಗಳ ಬೆಂಗಳೂರು ನಗರ ಜಿಲ್ಲೆಯ 50 ದೈಹಿಕ ವಿಕಲಚೇತನ ಫಲಾನುಭವಿಗಳಿಗೆ ಯಂತ್ರಚಾಲಿತ ತ್ರಿಚಕ್ರವಾಹನಗಳನ್ನು ವಿತರಿಸಲಾಯಿತು.

ಪಲ್ಲವಿ:ಬಾಬು:ಜಿಪಿಆರ್

## ರಾಷ್ಟ್ರದ ಅತ್ಯುತ್ತಮ
## ತೋಟಗಾರಿಕಾ ರಾಜ್ಯ ಕರ್ನಾಟಕ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ನವದೆಹಲಿಯ ಅಗ್ರಿಕಲ್ಚರ್ ಟುಡೇ ಗ್ರೂಪ್ ಅವರು ಪ್ರತಿ ವರ್ಷ ಕೃಷಿ ತೋಟಗಾರಿಕೆ ಪಶುಸಂಗೋಪನೆ ಮತ್ತು ಇತರೆ ವಿಭಾಗಗಳಲ್ಲಿ ನೀಡುವ ಅತ್ಯುತ್ತಮ ಪ್ರಶಸ್ತಿಯನ್ನು ಈ ಬಾರಿ ಕರ್ನಾಟಕ ರಾಜ್ಯ ತೋಟಗಾರಿಕಾ ಇಲಾಖೆಗೆ ನೀಡಿದೆ ಎಂದು ತೋಟಗಾರಿಕೆ ಇಲಾಖೆಯ ನಿರ್ದೇಶಕರು ತಿಳಿಸಿದ್ದಾರೆ.

ದೇಶದ ಹಸಿರುಕ್ರಾಂತಿ ಹರಿಕಾರ ಡಾ. ಎಂ. ಎಸ್. ಸ್ವಾಮಿನಾಥನ್ ಅವರ ಅಧ್ಯಕ್ಷತೆಯ ಪ್ರಶಸ್ತಿ ಆಯ್ಕೆ ಸಮಿತಿಯು ಕರ್ನಾಟಕ ರಾಜ್ಯವನ್ನು ಅತ್ಯುತ್ತಮ ತೋಟಗಾರಿಕಾ ರಾಜ್ಯವೆಂದು ತೀರ್ಮಾನಿಸಿದ್ದು, ಪ್ರಶಸ್ತಿಗೆ ಆಯ್ಕೆ ಮಾಡಿದೆ. ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳ ಉತ್ಪಾದನ ಕಳೆದ 10 ವರ್ಷಗಳಲ್ಲಿ 97.31 ಲಕ್ಷ ಟನ್‌ಗಳಿಂದ 169.4 ಲಕ್ಷ ಟನ್‌ಗಳಷ್ಟು ಹೆಚ್ಚಿದೆ.

ತೋಟಗಾರಿಕೆ ಇಲಾಖೆಯು ಹೊಸ ತಾಂತ್ರಿಕತೆಗಳನ್ನು ಅಳವಡಿಸಿ ವ್ಯವಸ್ಥಿತ ತಂತ್ರಜ್ಞಾನ ವರ್ಗಾವಣೆಯಿಂದ ರೈತರ ಉತ್ಪಾದನೆ ಹಾಗೂ ಆದಾಯ ಹೆಚ್ಚಿಸಲು ಶ್ರಮವಹಿಸಿದೆ. ಆಯ್ಕೆ ಸಮಿತಿಯು ಈ ಎಲ್ಲಾ ಅಂಶಗಳನ್ನು ಗಮನಿಸಿ ಕರ್ನಾಟಕ ಅತ್ಯುತ್ತಮ ತೋಟಗಾರಿಕೆ ರಾಜ್ಯ ಎಂದು ಘೋಷಿಸಿದೆ.

ಕೇಂದ್ರ ಗೃಹ ಸಚಿವ ರಾಜನಾಥ ಸಿಂಗ್ ಅವರು ಇಂದು ನವದೆಹಲಿಯ ಹೋಟೆಲ್ ತಾಜ್ ಪ್ಯಾಲೇಸ್‌ನಲ್ಲಿ ಪ್ರಶಸ್ತಿ ಪ್ರದಾನ ಮಾಡಲಿದ್ದು, ಕರ್ನಾಟಕ ಸರ್ಕಾರದ ಪರವಾಗಿ ತೋಟಗಾರಿಕೆ ಮತ್ತು ಕೃಷಿ

ಮಾರುಕಟ್ಟೆ ಸಚಿವ ಡಾ. ಶಾಮನೂರು ಶಿವಶಂಕರಪ್ಪ ಅವರು ಪ್ರಶಸ್ತಿ ಸ್ವೀಕರಿಸಲಿದ್ದಾರೆ ಎಂದು ತೋಟಗಾರಿಕಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪಲ್ಲವಿ:ಬಾಬು:ಜಿಪಿಆರ್**

# ಬೆಂಗಳೂರು ಮೆಟ್ರೋ ಎರಡನೇ ಹಂತದ ಯಶಸ್ವಿಗೆ 200 ಮಿಲಿಯನ್ ಯುರೋ ಸಾಲ ಯೋಜನೆ ಒಪ್ಪಂದ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ಬೆಂಗಳೂರು ಮೆಟ್ರೋ ಎರಡನೇ ಹಂತದ ಯೋಜನೆಗೆ ಎ.ಎಫ್.ಡಿ. (ಫ್ರಾನ್ಸ್ ಡೆವಲಪಮೆಂಟ್ ಎಜೆನ್ಸಿ) ಯು ನೀಡಲಿರುವ 200 ಮಿಲಿಯನ್ ಯುರೋ ಸಾಲ ಯೋಜನೆಯ ಕರಾರು ಒಪ್ಪಂದಕ್ಕೆ ಬಿ,ಎಂ.ಆರ್.ಸಿ. ಎಲ್ ಅವರ ಪರವಾಗಿ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಪ್ರದೀಪ್ ಸಿಂಗ್ ಖರೋಲಾ ಮತ್ತು ಎ.ಎಫ್.ಡಿ. ಪರವಾಗಿ ಪ್ರಾಂತೀಯ ನಿರ್ದೇಶಕರಾದ ನಿಕೊಲಸ್ ಫಿರ್ನಾಜ್ ಅವರು ಸಹಿ ಹಾಕಿದರು.

ವಿಧಾನಸೌಧದ ಕಲಾಪ ಸಮಿತಿ ಕೊಠಡಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಇಂದು ನಡೆದ ಸಭೆಯಲ್ಲಿ ಈ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಜಗತ್ತಿನಲ್ಲೇ ಬೆಂಗಳೂರು ನಗರ ಅತಿವೇಗವಾಗಿ ಬೆಳೆಯುತ್ತಿದ್ದು, 2ನೇ ಹಂತದ ಮೆಟ್ರೋ ಯೋಜನೆ ಪೂರ್ಣಗೊಂಡಿದ್ದು ನಗರದ ದಟ್ಟಣೆ ಕಡಿಮೆಯಾಗುತ್ತಿದೆ ಎಂದು ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡನೇ ಹಂತದ ಮೆಟ್ರೋ ಕಾಮಗಾರಿ ಪೂರ್ಣಗೊಳ್ಳಲು ಸಾಲ ನೀಡಿ ಸಹಕರಿಸುತ್ತಿರುವ ಫ್ರಾನ್ಸ್ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಬೆಂಗಳೂರು ನಗರಕ್ಕೆ ಮೆಟ್ರೋ ಯೋಜನೆ ಅನಿರ್ವಾಯವಾಗಿದೆ ಎಂದ ಮುಖ್ಯಮಂತ್ರಿ ಅವರು ರಾಜ್ಯ ಸರ್ಕಾರ, ನಗರ ಪ್ರದೇಶಗಳ ಮೂಲಭೂತ ಸೌಲಭ್ಯ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡುತ್ತಿದೆ ಎಂದರು.

ಬೆಂಗಳೂರು ವಿಭಾಗದ ಫ್ರಾನ್ಸ್ ಕೌನ್ಸಲ್ ಜನರಲ್ ಶ್ರೀ ಫ್ರಾಂಕಾಯ್ಸ್ ಗಾಲಿಯಾರ್ ಅವರು ಮಾತನಾಡಿ ಬೆಂಗಳೂರು ಮೆಟ್ರೋ ಮೊದಲ ಹಂತದ ಕಾಮಗಾರಿಗೆ ಈಗಾಗಲೇ 110 ಮಿಲಿಯನ್ ಯುರೋ ಸಾಲ ನೀಡಲಾಗಿದ್ದು ಇದು ಭಾರತದಲ್ಲಿ ಎಂ.ಎಫ್.ಡಿ. ನೀಡುತ್ತಿರುವ ಸಾಲದಲ್ಲಿಯೇ ಅತಿ ದೊಡ್ಡ ಮೊತ್ತವಾಗಿದೆ ಎಂದರು.

ಬೆಂಗಳೂರು ನಗರ ವೇಗವಾಗಿ ಬೆಳೆಯುತ್ತಿದ್ದು 2 ನೇ ಹಂತದ ಮೆಟ್ರೋ ಅಭಿವೃದ್ಧಿಗೆ ಈಗ 200 ಮಿಲಿಯನ್ ಯುರೋ ಸಾಲ ನೀಡುತ್ತಿವೆ. 2 ನೇ ಹಂತದ ಮೆಟ್ರೋ ಯೋಜನೆ ಪೂರ್ಣಗೊಂಡಲ್ಲಿ ನಗರದಲ್ಲಿನ ಟ್ರಾಫಿಕ್ ಸಮಸ್ಯೆ ಬಗೆಹರಿಯಲಿದೆ ಎಂದರು.

ಸರ್ಕಾರದ ಅಪರ ಕಾರ್ಯದರ್ಶಿಗಳು ಹಾಗೂ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಸತ್ಯಮೂರ್ತಿ, ಮುಖ್ಯಮಂತ್ರಿ ಅಪರ ಪ್ರಧಾನ ಕಾರ್ಯದರ್ಶಿಗಳಾದ ನರಸಿಂಹಯ್ಯ, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಎಸ್.ಎನ್. ಪ್ರಸಾದ್ ಹಾಗೂ ಉನ್ನತ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ಪಲ್ಲವಿ:ಕೆಪಿಪಿ::ಜಿಪಿಆರ್

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು: "ತಲ್ಲಣ" ಚಲನಚಿತ್ರ ಪ್ರದರ್ಶನ, ಸಂವಾದ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಸೆಪ್ಟೆಂಬರ್ 19 ರ ಶನಿವಾರದಂದು ಬೆಳ್ಳಿ ಸಿನಿಮಾ "ತಲ್ಲಣ" ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಚಿತ್ರದ ಕಾರ್ಯಕಾರಿ ನಿರ್ಮಾಪಕರಾದ ಶ್ರೀಮತಿ ವಸುಂಧರಾ ಕುಲಕರ್ಣಿ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.**

**ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಸೆಪ್ಟೆಂಬರ್ 19 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಟರಾದ ಕೆ. ಎಸ್. ಶ್ರೀಧರ್, ಸಂಕಲನಕಾರರಾದ ಎಂ. ಎನ್. ಸ್ವಾಮಿ ಹಾಗೂ ಛಾಯಾಗ್ರಾಹಕರಾದ ಸೂರ್ಯಕಾಂತ್ ಹೊನ್ನಾಳಿ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಬಾಬು:ಕೆಎಂ**

## ಮನೆಯಂಗಳದಲ್ಲಿ ಮಾತುಕತೆ ತಿಂಗಳ ಅತಿಥಿಯಾಗಿ ಎಸ್.ಎಂ. ಜಾಮ್ದಾರ್

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶನಾಲಯದ ವತಿಯಿಂದ ಸೆಪ್ಟೆಂಬರ್ 19 ರ ಶನಿವಾರದಂದು ಸಂಜೆ 4.00 ಗಂಟೆಗೆ ಕನ್ನಡ ಭವನದ ನಯನ ಸಭಾಂಗಣದಲ್ಲಿ "ಮನೆಯಂಗಳದಲ್ಲಿ ಮಾತುಕತೆ" ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಆಡಳಿತ ತಜ್ಞರಾದ ಎಸ್.ಎಂ. ಜಾಮ್ದಾರ್ ಅವರು ಆಗಮಿಸಲಿದ್ದಾರೆ.

ಅಂದು ಮಧ್ಯಾಹ್ನ 3-00 ಗಂಟೆಯಿಂದ ಆಂಜನೇಯ ಗದ್ದಿ ಅವರಿಂದ ವಚನ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು/ಕೆಎಂ

## ಫಲಿತಾಂಶ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)

2015 ರ ಜುಲೈ ಮಾಹೆಯಲ್ಲಿ ನಡೆದ ವಾಣಿಜ್ಯ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗಳಿಗೆ ಕೊರಿಯರ್ ಮೂಲಕ ಕಳುಹಿಸಿಕೊಡಲಾಗಿದೆ. ಫಲಿತಾಂಶವನ್ನು ಇಲಾಖಾ ವೆಬ್‌ಸೈಟ್ www.kseeb.kar.nic.in ನಲ್ಲಿ ದಿನಾಂಕ:19-9-2015 ರಂದು ಬೆಳಿಗ್ಗೆ 11-00 ಗಂಟೆಗೆ ಪ್ರಕಟಿಸಲಾಗುವುದು. ಸಂಸ್ಥೆಯ ಮುಖ್ಯಸ್ಥರು ತಮ್ಮ ಸಂಸ್ಥೆಗಳಲ್ಲಿ ಅಂದು ಅಪರಾಹ್ನ 4-00 ಗಂಟೆಗೆ ಫಲಿತಾಂಶ ಪ್ರಕಟಿಸಲು ಸೂಚಿಸಿದೆ. ಬೆಂಗಳೂರು ನಗರ ಜಿಲ್ಲೆಯ ವಾಣಿಜ್ಯ ಸಂಸ್ಥೆಯ ಮುಖ್ಯಸ್ಥರು ದಿನಾಂಕ: 19-9-2015 ರಂದು ಬೆಳಿಗ್ಗೆ 10 ಗಂಟೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ವಾಣಿಜ್ಯ ಶಾಖೆಯಲ್ಲಿ ಫಲಿತಾಂಶ ಪಟ್ಟಿಯನ್ನು ಖುದ್ದಾಗಿ ಪಡೆದುಕೊಳ್ಳಲು ಪ್ರಕಟಣೆ ತಿಳಿಸಿದೆ.

ಪಲ್ಲವಿ/ಬಾಬು/ಕೆಎಂ

## ವಾರ್ತಾ ವಿಶೇಷ:

## ವಿಶ್ವವಿಖ್ಯಾತ ಕ್ರಿಕೆಟ್ ಆಫ್ ಸ್ಪಿನ್ನರ್ ಎರಾಪಳ್ಳಿ ಪ್ರಸನ್ನ @ 75

ನೂರು ವರುಷ ಬಾಳಿರಿ
ನೂರು ದೀಪ ಬೆಳಗಿರಿ
ನೂರು ಬಾಳು ಬೆಳಗಲಿ
ನೀವೇ ಜ್ಯೋತಿ ಆಗಿರಿ

1974- ಕರ್ನಾಟಕ ರಾಜ್ಯದ ಕ್ರಿಕೆಟ್ ಇತಿಹಾಸದಲ್ಲಿ ಸುವರ್ಣಾಕ್ಷರಗಳಿಂದ ಬರೆದಿಡಬೇಕಾದ ದಿನ. 1974 ರ ಮಾರ್ಚ್ 23 ರಿಂದ ರಾಜಸ್ಥಾನದ ಜೈಪುರದಲ್ಲಿರುವ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ

ನಡೆದ 5 ದಿನಗಳ ರಾಷ್ಟ್ರೀಯ ರಣಜಿ ಟ್ರೋಫಿ ಫೈನಲ್ ಪಂದ್ಯದ 4 ನೇ ದಿನದ ಆಟ ನಡೆದಿತ್ತು. ರಾಜಸ್ಥಾನ ತಂಡದ ಕೊನೆಯ ವಿಕೆಟ್‌ಗೆ ವಿಶ್ವವಿಖ್ಯಾತ ಗೂಗ್ಲಿ ಬೌಲರ್ ಬಿ. ಎಸ್. ಚಂದ್ರಶೇಖರ್ ತಮ್ಮ 18 ನೇ ಓವರ್‌ನ ಮೂರನೇ ಎಸೆತ ಹಾಕುತ್ತಿದ್ದಂತೆ ಕೊನೆಯ ವಿಕೆಟ್ ಬಿತ್ತು. 17 ವರ್ಷಗಳಷ್ಟು ಸುಧೀರ್ಘಕಾಲ ಬಾಂಬೆಯ ವಶದಲ್ಲಿದ್ದ ರಣಜಿಟ್ರೋಫಿಯನ್ನು ಕರ್ನಾಟಕ ತಂಡ ತನ್ನದಾಗಿಸಿಕೊಂಡಿತು. ಮಾನ್‌ಸಿಂಗ್ ಸ್ಟೇಡಿಯಂನಲ್ಲಿ ಮೆರೆದಿದ್ದ ಕ್ರಿಕೆಟ್ ಪ್ರೇಮಿಗಳು ಖುಷಿಯಿಂದ ಕುಣಿದಾಡಿದರು. ಕರ್ನಾಟಕ ರಾಜ್ಯದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಯಿತು. ಇದಕ್ಕೆ ಕ್ರಿಕೆಟ್ ತಂಡದ ಎಲ್ಲ ಆಟಗಾರರ ಜೊತೆಗೆ ಮುಖ್ಯ ಕಾರಣರಾದವರು ತಂಡದ ನಾಯಕ ವಿಶ್ವವಿಖ್ಯಾತ ಆಫ್ ಸ್ಪಿನ್ನರ್ ಎರಾಪಳ್ಳಿ ಪ್ರಸನ್ನ.

ಅಪ್ಪಟ ಕನ್ನಡಿಗ ಬೆಂಗಳೂರಿನ ಎರಾಪಳ್ಳಿ ಪ್ರಸನ್ನ ವಿಶ್ವ ಕ್ರಿಕೆಟ್‌ನ ಓರ್ವ ಪ್ರಖ್ಯಾತ ಆಫ್ ಸ್ಪಿನ್ನರ್. ರಾಜ್ಯ ಹಾಗೂ ರಾಷ್ಟ್ರದ ಕ್ರಿಕೆಟ್‌ಗೆ ಇವರ ಕೊಡುಗೆ ಅಪಾರ. ಇಂದಿನ ರಣಜಿ ಪಂದ್ಯಗಳು ನಡೆಯುವಾಗ ಪ್ರೇಕ್ಷಕರ ಗ್ಯಾಲರಿ ಬಣಗುಡುತ್ತಿದ್ದರೆ ಅಂದಿನ ದಿನಗಳಲ್ಲಿ ಪ್ರೇಕ್ಷಕರ ಗ್ಯಾಲರಿ ತುಂಬಿ ತುಳುಕುತ್ತಿತ್ತು. ಅಂದು ಕ್ರಿಕೆಟ್‌ನಲ್ಲಿ ಆಟಕ್ಕೆ ಪ್ರಾಧಾನ್ಯತೆ ಇತ್ತು. ಭಾರತದ ಟೆಸ್ಟ್ ತಂಡವನ್ನು ಅರ್ಧಕ್ಕಿಂತ ಹೆಚ್ಚು ಆಟಗಾರರು ಕರ್ನಾಟದವರೇ ಪ್ರತಿನಿಧಿಸುತ್ತಿದ್ದರು. ವಿಶ್ವವಿಖ್ಯಾತ ಬೌಲರ್ ಇ.ಎ.ಎಸ್. ಪ್ರಸನ್ನ, ಬಿ.ಎಸ್. ಚಂದ್ರಶೇಖರ್, ಜಿ. ಆರ್. ವಿಶ್ವನಾಥ್, ವಿಶ್ವವಿಖ್ಯಾತ ವಿಕೇಟ್ ಕೀಪರ್ ಎಸ್.ಎಂ. ಹೆಚ್. ಕೀರ್ಮಾನಿ, ಬ್ರಿಜೇಶ್ ಪಟೇಲ್, ಸುಧಾಕರರಾವ್, ಬಿ.ಎಸ್. ವಿಜಯಕುಮಾರ್, ಬಿ. ವಿಜಯಕೃಷ್ಣ., ಎ.ವಿ. ಜಯಪ್ರಕಾಶ್ ಮುಂತಾದವರೆಲ್ಲ ಕರ್ನಾಟಕ ಕ್ರಿಕೆಟ್ ತಂಡದಲ್ಲಿದ್ದರು.

ಅಂದು ಮೊಟ್ಟ ಮೊದಲ ಬಾರಿಗೆ ಕರ್ನಾಟಕಕ್ಕೆ ರಣಜಿ ಟ್ರೋಫಿ ಬರಲು ಪ್ರಮುಖ ಪಾತ್ರ ವಹಿಸಿದವರು ಎರಾಪಳ್ಳಿ ಅನಂತರಾವ್ ಶ್ರೀನಿವಾಸ ಪ್ರಸನ್ನ. ಅವರು 1940 ರ ಮೇ 22 ರಂದು ಬೆಂಗಳೂರಿನಲ್ಲಿ ಜನಿಸಿದರು. ತಮ್ಮ ಪ್ರಾಥಮಿಕ ವಿಧ್ಯಾಭ್ಯಾಸವನ್ನು ಬೆಂಗಳೂರಿನಲ್ಲಿ ಮುಗಿಸಿದ ಪ್ರಸನ್ನ ಅವರು ಇಂಜಿನಿಯರ್ ಪದವಿ ಮುಗಿಸಿದ್ದು– ಮೈಸೂರಿನ ಪ್ರಖ್ಯಾತ ಎನ್ ಐ ಇ ಕಾಲೇಜಿನಲ್ಲಿ. ಪ್ರಸನ್ನ 1961 ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಕ್ರಿಕೆಟ್ ಟೆಸ್ಟ್ ಪಂದ್ಯವೊಂದನ್ನು ಆಡಿದ ನಂತರ "ನಾನು ಇಂಜಿನಿಯರಿಂಗ್ ಮುಗಿಸುವವರೆಗೆ ಕ್ರಿಕೆಟ್ ಆಡೋಲ್ಲ" ಎಂದು ನಿರ್ಧರಿಸಿ ಇಂಜಿನಿಯರಿಂಗ್ ಮುಗಿದ ನಂತರ 1967 ರಲ್ಲಿ ಮತ್ತೆ ಕ್ರಿಕೆಟ್ ಪ್ರವೇಶಿಸಿದರು.

ಕರ್ನಾಟಕ ರಣಜಿ ಟ್ರೋಫಿಗಳಿಸಿದ ಸಮಯದಲ್ಲಿ ತಂಡದ ನಾಯಕರಾಗಿದ್ದ ಇವರು ಎರಡೂ ಇನ್ನಿಂಗ್ಸ್‌ಗಳಿಂದ 9 ವಿಕೆಟ್ ಗಳಿಸಿದ್ದರು. ವಿಶ್ವದ ಖ್ಯಾತ ಗೂಗ್ಲಿ ಬೌಲರ್ ಆಗಿದ್ದ ಬಿ.ಎಸ್. ಚಂದ್ರಶೇಖರ್ ಮೊದಲ ವಿಕೆಟ್ ಪಡೆದಾಗ ರಣಜಿ ಪಂದ್ಯಗಳಲ್ಲಿ 300 ವಿಕೆಟ್ ಪಡೆದ ಸಾಧನೆ ಮಾಡಿದ್ದರು. ಅಂದಿನ ವಿಶ್ವದ ಪ್ರಸಿದ್ಧ ತಂಡಗಳಾದ ವೆಸ್ಟ್ ಇಂಡೀಸ್, ನ್ಯೂಜಿಲೆಂಡ್, ಆಸ್ಟ್ರೇಲಿಯಾ, ಇಂಗ್ಲೆಂಡ್ ಮುಂತಾದ ಸಶಕ್ತ ತಂಡಗಳ ವಿರುದ್ದ ತಮ್ಮ ಅದ್ಭುತ ಬೌಲಿಂಗ್ ಮೂಲಕ ಭಾರತ ತಂಡಕ್ಕೆ ಪ್ರಾಧಾನ್ಯತೆ ತಂದುಕೊಟ್ಟರು. ನ್ಯೂಜಿಲೆಂಡ್ ತಂಡದ ವಿರುದ್ದ 3 ಬಾರಿ ಇನ್ನಿಂಗ್ಸ್ ಒಂದರಲ್ಲಿ 8 ವಿಕೆಟ್ ಪಡೆದ ಇವರ ಸಾಧನೆ ಕ್ರಿಕೆಟ್ ಇತಿಹಾಸದಲ್ಲಿ ದಾಖಲಾಗಿದೆ. ತಾವು ಆಡಿದ ಮೊದಲ 20 ಟೆಸ್ಟ್ ಪಂದ್ಯಗಳಲ್ಲಿ 100 ವಿಕೆಟ್ ಪಡೆದಿದ್ದರು. ಕ್ಲೈವ್‌ಲಾಯ್ಡ್, ಆಲ್ವಿನ್ ಕಾಳಿಚರಣ್ ಅವರಂತಹ ಪ್ರಖ್ಯಾತ ಆಟಗಾರರು ಪ್ರಸನ್ನ ಅವರನ್ನು ಅತ್ಯಂತ ಶ್ರೇಷ್ಠ ಬೌಲರ್ ಎಂದು ಬಣ್ಣಿಸುತ್ತಿದ್ದರು. ಇ.ಎ.ಎಸ್. ಪ್ರಸನ್ನ ಸ್ಪಿನ್ ಮಾಡುತ್ತಿದ್ದ ವೈಖರಿ ಬ್ಯಾಟುಗಾರರ ಜಾಣ್ಮೆಯನ್ನು ಮೀರಿಸುತ್ತಿದ್ದ ಶಾಟ್ ಪಿಚ್ ಡೆಲಿವರಿಗಳು ಬೌಲಿಂಗ್‌ನಲ್ಲಿದ್ದ ಅತ್ಯದ್ಭುತ ಜಾಣ್ಮೆ, ನಿಯಂತ್ರಣ ಮತ್ತು ಕುಶಲತೆಗೆ

ಪಖ್ಯಾತರಾಗಿದ್ದರು. ಅತ್ಯಂತ ಕಡಿಮೆ ರನ್ ನೀಡಿ ವಿಕೆಟ್ ಕಬಳಿಸುವುದು ಇವರ ಬೌಲಿಂಗ್‌ನ ವಿಶೇಷತೆಯಾಗಿತ್ತು.

ಪ್ರಸನ್ನ ಅವರು ಆಡಿದ್ದು 49 ಟೆಸ್ಟ್ ಪಂದ್ಯಗಳು. ಅವರು ಗಳಿಸಿದ್ದು 189 ವಿಕೆಟ್‌ಗಳು ಅವರು ಆಡಿದ 235 ಪ್ರಥಮ ದರ್ಜೆ ಪಂದ್ಯಗಳಲ್ಲಿ ಒಟ್ಟಾರೆ 950 ವಿಕೆಟ್ ಪಡೆದಿದ್ದರು. ಟೆಸ್ಟ್ ಪಂದ್ಯಗಳಲ್ಲಿನ ಸರಾಸರಿ 30.38 ಆಗಿದ್ದು 10 ಬಾರಿ ಇನ್ನಿಂಗ್ಸ್ ಒಂದರಲ್ಲಿ 5 ಕ್ಕೂ ಹೆಚ್ಚು ವಿಕೆಟ್ ಪಡೆದರೆ ಪಂದ್ಯವೊಂದರಲ್ಲಿ 10 ವಿಕೆಟ್‌ಗಳನ್ನು 2 ಬಾರಿ ಪಡೆದಿದ್ದರು. ಟೆಸ್ಟ್‌ನಲ್ಲಿ 18 ಕ್ಯಾಚುಗಳನ್ನು ಹಿಡಿದಿದ್ದರು. ಬಲಗೈ ಬ್ಯಾಟ್ಸ್‌ಮನ್ ಆಗಿದ್ದ ಇವರು ಹಲವು ಬಾರಿ ಬ್ಯಾಟಿಂಗ್ ಪ್ರದರ್ಶನವನ್ನು ನೀಡಿದ್ದರು. 1978 ರಲ್ಲಿ ಪಾಕಿಸ್ಥಾನ ತಂಡದ ವಿರುದ್ಧ ಆಡಿದ್ದೇ ಇವರ ಕೊನೆಯ ಟೆಸ್ಟ್ ಪಂದ್ಯ.

ಪ್ರಸನ್ನ ಅವರು 1970 ರಲ್ಲಿ ಪದ್ಮಶ್ರೀ ಪ್ರಶಸ್ತಿ, 2006 ರಲ್ಲಿ ಕ್ಯಾಸ್ಟ್ರೋಲ್ ಜೀವಮಾನದ ಪ್ರಶಸ್ತಿ, ಪಡೆದಿದ್ದಾರೆ. 1985 ರಲ್ಲಿ ಭಾರತ ತಂಡ ಆಸ್ಟ್ರೇಲಿಯದಲ್ಲಿ ಬೆನ್ಸ್‌ನ್ ಹೆಡ್ಜಸ್ ಕಪ್ ಗೆದ್ದ ಸಂದರ್ಭದಲ್ಲಿ ಭಾರತ ತಂಡದ ಮ್ಯಾನೇಜರ್ ಆಗಿದ್ದ ಇ.ಎ.ಎಸ್. ಪ್ರಸನ್ನ ಅವರ ಬಗ್ಗೆ ಅಂದಿನ ತಂಡದ ನಾಯಕರಾಗಿದ್ದ ಸುನೀಲ್ ಗವಾಸ್ಕರ್ ಹೇಳಿದ ಮಾತು – "ನಮ್ಮ ಮ್ಯಾನೇಜರ್ ಪ್ರಸನ್ನ ಅವರು ನೆಟ್ಸ್‌ನಲ್ಲಿ ಬೌಲಿಂಗ್ ಮಾಡುವ ವೈಖರಿಯನ್ನು ನೋಡಿದಾಗ ನನ್ನ 11 ಜನರ ತಂಡದಲ್ಲಿ ಸೇರಿಸಿಕೊಳ್ಳಬೇಕೆಂದು ಪ್ರಚೋದನೆಗೆ ಒಳಗಾಗುತ್ತಿದ್ದೆ. ಕ್ಷೇತ್ರ ರಕ್ಷಣೆ ವಿಭಾಗ ಅಡ್ಡ ಬರದಿದ್ದರೆ ನಾನು ಅವರನ್ನು ಸೇರಿಸಿಕೊಂಡು ಬಿಡುತ್ತಿದ್ದೆ" ಎಂದು ಹೇಳಿರುವುದು ನಿವೃತ್ತಿಯ ನಂತರವೂ ಪ್ರಸನ್ನ ಅವರ ಬೌಲಿಂಗ್ ಜಾಣ್ಮೆ ಬಗ್ಗೆ ಇರುವ ಗೌರವಪೂರ್ಣ ಉದಾಹರಣೆಯಾಗಿದೆ.

ಇ.ಎಸ್.ಎಸ್. ಪ್ರಸನ್ನ ಅವರು ಕ್ರಿಕೆಟ್‌ನಲ್ಲಷ್ಟೇ ಅಲ್ಲದೇ ಇಂಜಿನಿಯರ್ ಆಗಿ ತಂತ್ರಜ್ಞಾನ ಕ್ಷೇತ್ರದಲ್ಲಿ ಹೆಸರು ಗಳಿಸಿದ್ದರು. ಅಂದಿನ ರೆಂಕೋ, ಬಿ.ಹೆಚ್.ಇ.ಎಲ್. ಕುದುರೆಮುಖ ಕಬ್ಬಿಣ ಅದಿರು ಕಾರ್ಖಾನೆ ಹಾಗೂ ಎನ್.ಜಿ. ಇ.ಎಫ್.ಗಳಲ್ಲಿ ಪ್ರಮುಖ ತಾಂತ್ರಿಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು.

ಇಂದು ಬೆಂಗಳೂರಿನ ದೊಮ್ಮಲೂರು ಬಡಾವಣೆಯಲ್ಲಿ ಅತ್ಯಂತ ಸರಳ ಬದುಕು ನಡೆಸುತ್ತಿರುವ ವಿಶ್ವವಿಖ್ಯಾತ ಆಫ್ ಸ್ಪಿನ್ನರ್ ಎರಾಪಳ್ಳಿ ಪ್ರಸನ್ನ ಅವರಿಗೀಗ ಅತ್ಯಂತ ಬೆಲೆಬಾಳುವ 75 ವರ್ಷ ತುಂಬಿದೆ. ಸರಳ ವ್ಯಕ್ತಿತ್ವದ ಅವರ ನಡೆನುಡಿಗಳು ಎಂತಹವರಿಗೂ ಮಾದರಿ ಎನಿಸಬಲ್ಲದು.

–ಕೇಶವ್ ಎಂ

ಬರಹ: ಮಂಜುನಾಥಬಾಬು ಟಿ.ಸಿ.
ಸಹಾಯಕ ನಿರ್ದೇಶಕರು

## ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:20-09-2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಮರಿದೇವರು ಎಂ. ಮತ್ತು ತಂಡದವರಿಂದ ಜಾನಪದ ಗೀತೆಗಳ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
2. ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ 4ನೇ ಪಡೆಯ ಬ್ಯಾಂಡ್ ಕಲಾವಿದರು ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ ಆಕರ್ಷಕ "**ಪೊಲೀಸ್ ಬ್ಯಾಂಡ್**" ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡುತ್ತಾರೆ.
3. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಸ್ಟೀಫನ್ ಮತ್ತು ತಂಡ, ಹುಬ್ಬಳ್ಳಿರವರಿಂದ ಜಾನಪದ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
5. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
8. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
9. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ಶ್ರೀಮತಿ ಸೀಮಾ ಜವಹಾರ್, ಆರ್ಟ್ ಸೆಂಟರ್, ಯಲಹಂಕರವರ ಶಿಷ್ಯಂದಿರಾದ ಸ್ಮೃತಿ ನಂದನ್, ಸಾಹಿತ್ಯ, ಮಧುರ, ದೇವಯಾನಿ, ಗ್ರೀಷ್ಮಾ ಹಾಗೂ ಅನುಭೂತಿರವರಿಂದ ನೃತ್ಯ ಪ್ರರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಚಿ. ಗೌತಮ್ ಹೆಬ್ಬಾರ್ ಮತ್ತು ತಂಡದವರಿಂದ ಕೊಳಲು ವಾದನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಶ್ರೀ ಬಿ.ಕೆ. ಅನಂತಸ್ವಾಮಿರವರ ಶಿಷ್ಯರಾದ ಶ್ರೀ ಪ್ರಸನ್ನ ರಾಮಸ್ವಾಮಿರವರಿಂದ ಕೊಳಲುವಾದನ ಮತ್ತು ಶ್ರೀ ಸತೀಶ್‌ರಾಜನ್‌ರವರಿಂದ ಮೃದಂಗ ವಾದನ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಡಾ. ಕೆ. ಅಣ್ಣಮ್ಮ, ಸಾಹಿತಿಗಳು ಹಾಗೂ ಕನ್ನಡ ಪ್ರಾಧ್ಯಾಪಕರು, ತುಮಕೂರು ವಿಶ್ವವಿದ್ಯಾಲಯರವರಿಂದ "ಮಾಸ್ತಿ ವೆಂಕಟೇಶ ಅಯ್ಯಂಗಾರ್‌ರವರ ಸಾಹಿತ್ಯ ಹಾಗೂ ಕನ್ನಡ ಚಿಂತನೆ" ಬಗ್ಗೆ ಉಪನ್ಯಾಸ ಕಾರ್ಯಕ್ರಮ ಮತ್ತು ಕೆ.ಟಿ. ದರ್ಶನ್, ಬಾಲಕಲಾವಿದರವರಿಂದ ಭರತ ನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 9.00 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ವಿಶ್ವೇಶ್ವರಯ್ಯ ಇಂಡಸ್ಟ್ರಿಯಲ್ & ಟೆಕ್ನಲಾಜಿಕಲ್ ಮ್ಯೂಸಿಯಂ, ಬೆಂಗಳೂರುರವರಿಂದ "Unexpected Science Show" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 11.00 ಗಂಟೆಯವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ತರಭೇತಿಯ ವಿದ್ಯಾರ್ಥಿಗಳಿಂದ ಲಿಂಗರೀತಿ ಮತ್ತು ನಿರ್ಲಿಂಗ ರೀತಿಯ ಸಸ್ಯಾಭಿವೃದ್ಧಿ ವಿಧಾನಗಳ ಬಗ್ಗೆ ಮಾಹಿತಿ ಹಾಗೂ ಪ್ರಾತ್ಯಕ್ಷತೆಗಳನ್ನು ತಿಳಿಸಿಕೊಡಲಾಗುತ್ತದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಆಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.

ಪಲ್ಲವಿ/ಬಾಬು/ಕೆಎಂ

## Special Music, Dance and Talavadya Exam

Bangalore, September 18, (Karnataka Information)

Karnataka Secondary Education Examination Board will be conducting Special Music, Dance and Talavadya Examinations conducted by K.S.E.E.B.Bangalore for the year 2015

Senior, vidwatpoorva, vidwat Final Theory Examinations will be conducted on 10.10.2015 &11.10.2015 and Junior Theory Examinations will be conducted on 11.10.2015

The Junior Practical Examinations will commence from 12.10.2015 and Senior, vidwatPoorva, Vidwat Final practical Examinations will commence from 23.10.2015

All the students are hereby informed to collect the Admission Tickets and Practical Examination date from the Centres, where they have submitted their applications earlier after 25-09-2015.

pallavi/babu/km

## ವಿಶೇಷ ಸಂಗೀತ,ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿವತಿಯಿಂದ ಅಕ್ಟೋಬರ್–2015ನೇ ಸಾಲಿನಲ್ಲಿ ನಡೆಯುವ ವಿಶೇಷ ಸಂಗೀತ,ನೃತ್ಯ ಹಾಗೂ ತಾಳವಾದ್ಯ ಸೀನಿಯರ್, ವಿದ್ವತ್ ಪೂರ್ವ , ವಿದ್ವತ್‌ಅಂತಿಮ ವಿಭಾಗದ ಥಿಯರಿ ಪರೀಕ್ಷೆಗಳು ದಿನಾಂಕ: 10.10.2015 ಮತ್ತು 11.10.2015 ರಂದು ನಡೆಯುತ್ತವೆ. ಜ್ಯೂನಿಯರ್ ವಿಭಾಗದ ಥಿಯರಿ ಪರೀಕ್ಷೆಗಳು ದಿನಾಂಕ: 11.10.2015 ರಂದು ನಡೆಯಲಿವೆ.

ಜ್ಯೂನಿಯರ್ ವಿಭಾಗದ ಪ್ರಾಯೋಗಿಕ ಪರೀಕ್ಷೆಗಳು ದಿನಾಂಕ:12.10.2015 ರಿಂದ ಹಾಗೂ ಸೀನಿಯರ್, ವಿದ್ವತ್ ಪೂರ್ವ, ವಿದ್ವತ್ ಅಂತಿಮ ಪ್ರಾಯೋಗಿಕ ಪರೀಕ್ಷೆಗಳು ದಿನಾಂಕ: 23.10.2015 ರಿಂದ ಪ್ರಾರಂಭಗೊಳ್ಳುತ್ತವೆ.

ಪರೀಕ್ಷಾ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳು, ತಮ್ಮ ಪ್ರವೇಶ ಪತ್ರಗಳನ್ನು ತಾವು ಅರ್ಜಿ ಸಲ್ಲಿಸಿದ್ದ ಪರೀಕ್ಷಾ ಕೇಂದ್ರಗಳಲ್ಲಿ ದಿನಾಂಕ:25–09–2015ರ ನಂತರ ಪಡೆಯಲು ಮಂಡಳಿ ತಿಳಿಸಿದೆ. ಪ್ರಾಯೋಗಿಕ ಪರೀಕ್ಷೆಯ ವೇಳಾಪಟ್ಟಿಯ ಬಗ್ಗೆ ಸಂಬಂಧಿಸಿದ ಪರೀಕ್ಷಾಕೇಂದ್ರದ ಮುಖ್ಯಸ್ಥರನ್ನು ಸಂಪರ್ಕಿಸಲು ತಿಳಿಸಿದೆ.

ಪಲ್ಲವಿ/ಬಾಬು/ಕೆಎಂ

## ಸೆಪ್ಟೆಂಬರ್ 21 ರಂದು ಸಚಿವ ಸಂಪುಟ ಸಭೆ

**ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ)**

**ರಾಜ್ಯ ಸಚಿವ ಸಂಪುಟ ಸಭೆಯು ಸೆಪ್ಟೆಂಬರ್ 21 ರ ಸೋಮವಾರ ಅಪರಾಹ್ನ 12.00 ಘಂಟೆಗೆ ವಿಧಾನ ಸೌಧ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟ ಸಭಾಮಂದಿರದಲ್ಲಿ ನಡೆಯಲಿದೆ.**

ಪಲ್ಲವಿ/ಬಾಬು/ಕೆಎಂ